# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕ ಅಭಿಯಂತರರ ಕಛೇರಿ ವಾರ್ಡ್ ಸಂಖ್ಯೆ: 138 ಛಲವಾದಿಪಾಳ್ಯ ಬೆಂಗಳೂರು

***************************************************************************************************************

ಸಂಖ್ಯೆ: W-138/Committee-07-01/2022-23 Dt: 02/07/2022

## ವಾರ್ಡ್ ಹಂತದ ಸಮಿತಿ ಸಭೆ

ವಾರ್ಡ್–138

ದಿನಾಂಕ: 02/07/2022 ರಂದು ಬೆಳಗ್ಗೆ 12.30 ಗಂಟೆಗೆ ವಾರ್ಡ್ ಸಂಖ್ಯೆ:138 ಛಲವಾದಿಪಾಳ್ಯ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮ್ಮದ್ ಜಾಫರ್ ಸಾಧಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಂಟಿ ನಿರ್ದೇಶಕರು (ನಗರ ಯೋಜನೆ –ದಕ್ಷಿಣ) ಬಿಬಿಎಂಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡಿನ ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ: 138 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

### ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಓಲ್ಡ್ ಪೆನ್ಷನ್ ಮೊಹಲ್ಲಾದಲ್ಲಿ ಬೀದಿ ದೀಪದ ಬಗ್ಗೆ ದೂರು ಸಲ್ಲಿಕೆಯಾಗಿರುತ್ತದೆ. ಈ ಬಗ್ಗೆ ಕಿರಿಯ ಅಭಿಯಂತರರು (ವಿದ್ಯುತ್) ರವರಿಗೆ ವರದಿ ನೀಡುವಂತೆ ಕೋರಿ, ಕೂಡಲೇ ವಿದ್ಯುತ್ ದೀಪ ದುರಸ್ಥಿಗೊಳಿಸಲು ಸೂಚಿಸುವಂತೆ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಿದರು.

ಅಂಜನಪ್ಪ ಗಾರ್ಡನ್ 6ನೇ ಅಡ್ಡರಸ್ತೆಯಲ್ಲಿ ಕಸ ವಿಲೇವಾರಿ ಸರಿಯಾಗಿ ಆಗುತ್ತಿರುವುದಿಲ್ಲ. ಈ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿಯವರು ಸೂಚಿಸಿದರು.

ರಸ್ತೆ ಗುಂಡಿ ಮುಚ್ಚುವ ಕಾಮಗಾರಿಯ ಬಗ್ಗೆ ಹೆಚ್ಚಿನ ಗಮನ ಹರಿಸಲು ನೋಡಲ್ ಅಧಿಕಾರಿಗಳು ಕಾರ್ಯದರ್ಶಿಗಳಿಗೆ ತಿಳಿಸಿದರು.

ಜೈಭೀಮ್ ನಗರದಲ್ಲಿ ಮಳೆ ಬಂದರೆ ಮೋರಿ ನೀರು ಮನೆಯೊಳಗೆ ನುಗ್ಗುತ್ತದೆ. ಚರಂಡಿ ಮತ್ತು ಮೋರಿಯಲ್ಲಿ ಕಸ ತುಂಬಿಕೊಂಡು ನೀರು ಅಲ್ಲೆ ನಿಂತು ಹೋಗಿದೆ. ಇದರಿಂದ ಸೊಳ್ಳೆ ಕಾಟವು ಹೆಚ್ಚಾಗಿದೆ ಎಂದು ಸ್ಥಳೀಯರು ಮನವಿ ಮಾಡಿದರು. ಈ ಬಗ್ಗೆ ಸಿಲ್ಟ್ ಅಂಡ್ ಟ್ರ್ಯಾಕ್ಟರ್ ಉಪಯೋಗಿಸಿಕೊಂಡು ಹೂಳು ತೆಗೆದು ನೀರು ಹರಿದು ಹೋಗುವಂತೆ ತಾತ್ಕಾಲಿಕವಾಗಿ ಸಮಸ್ಯೆ ಬಗೆಹರಿಸಿ ಮುಂದಿನ ಅನುದಾನದಲ್ಲಿ ಕಾಮಗಾರಿ ಕೈಗೊಳ್ಳುವಂತೆ ಕಾರ್ಯದರ್ಶಿಗಳಿಗೆ ನೋಡಲ್ ಅಧಿಕಾರಿಯವರು ಸೂಚಿಸಿದರು.

ಪ್ರ.ತಿ.ನೋ

Scanned by CamScanner

ಆಂಜನಪ್ಪ ಗಾರ್ಡನ್ 5 ಮತ್ತು 6ನೇ ಕ್ರಾಸಿನಲ್ಲಿ ಕುಡಿಯುವ ನೀರನ್ನು ಸರಿಯಾದ ಸಮಯಕ್ಕೆ ಬಿಡುತ್ತಿಲ್ಲ. ಅವರು ಬೇರೆ ಕಡೆ ಹೋಗಿ ತರುವುದು ಕಷ್ಟವಾಗಿದೆ ಎಂದು ಸ್ಥಳೀಯರು ಮನವಿ ಮಾಡಿದರು. ಈ ಬಗ್ಗೆ BWSSB ಅಧಿಕಾರಿಗಳಿಗೆ ನೋಡಲ್ ಅಧಿಕಾರಿಯವರು ಸಮರ್ಪಕವಾಗಿ ನೀರು ಕಲ್ಪಿಸುವ ಬಗ್ಗೆ ನಿರ್ದೇಶನ ನೀಡಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು ಸಭೆಯ ನಡವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

I/c ಕಾರ್ಯದರ್ಶಿ ಮತ್ತು
ಕಿರಿಯ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

Scanned by CamScanner